**ದಿನಾಂಕ 27.09.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.**

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯವನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಚಾರಗಳನ್ನು ನಾನೇ ಹೇಳಿ ಬರೆಯಿಸಿ ರುಜು ಮಾಡಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿವೆ.

ಅಧಿಕಾರ ಪತ್ರವನ್ನು **ನಿಪಿ 15** ಎಂದು, ಎಂ.ಎಲ್.ಸಿ ರಿಜಿಸ್ಟರ್ ಎಕ್ಸ್ ಟ್ರಾಕ್ಟ್ ಮತ್ತು ಪೊಲೀಸ್ ಇಂಟಿಮೇಷನ್ ನ ಧೃಡಿಕೃತ ಪ್ರತಿ( ಮೂಲ ವಹಿಯೊಂದಿಗೆ ಹೋಲಿಕೆ ಮಾಡಿ ಮೂಲ ವಹಿಯನ್ನು ಸಾಕ್ಷಿಗೆ ಹಿಂದಿರುಗಿಸಲಾಯಿತು) ಗಳನ್ನು ಕ್ರಮವಾಗಿ **ನಿಪಿ 16 ಮತ್ತು 17** ಎಂದು, ಕೇಸ್ ಶೀಟನ್ನು **ನಿಪಿ 18** ಎಂದು ಗುರುತಿಸಲಾಯಿತು.

1ನೇ ಎದುರುದಾರರು ಏಕ ಪಕ್ಷೀಯವಾಗಿರುವುದರಿಂದ ಪಾಟೀ ಸವಾಲು ಏನೂ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಪಾಟೀ ಸವಾಲುಃ 2ನೇ ಎದುರುದಾರರ ಪರ ಮಾನ್ಯ ವಕೀಲರಿಂದ.**

ನಾನು ಹಾಜರುಪಡಿಸಿರುವ ದಾಖಲಾತಿಗಳ ಬಗ್ಗೆ ನನಗೆ ವಯಕ್ತಿಕ ಮಾಹಿತಿ ಇಲ್ಲ. ಗಾಯಾಳುವಿಗೆ ಚಿಕಿತ್ಸೆ ನೀಡಿದ ವೈದ್ಯರ ಹೆಸರು ಡಾ|| ಅನಂತಕೇಶವ. ಸದರಿ ವೈದ್ಯರು ಈಗಲೂ ನಮ್ಮ ಆಸ್ಪತ್ರೆಯಲ್ಲಿ ಕೆಲಸ ಮಾಡುತ್ತಿದ್ದಾರೆ. ಅರ್ಜಿದಾರರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**